# ಪ್ರಾಧಿಕಾರದ ಅಭಿವೃದ್ಧಿಗೆ ಸೂಕ್ತ ವ್ಯಕ್ತಿ ವಿರುಪಣ್ಣ ಕಲ್ಲೂರ್‌ರವರಿಗೆ ಕೊಪ್ಪಳ ತಾಲೂಕು ಗಂಗಾಮತ ಸಮಾಜದಿಂದ ಸನ್ಮಾನ



ಕೊಪ್ಪಳ: ಸಮಾಜದ ಜಿಲ್ಲಾ ಉಪಾಧ್ಯಕ್ಷರಾದ ಕ್ರಿಯಾಶೀಲ ವ್ಯಕ್ತಿ ಪರಿಶ್ರಮದ ವ್ಯಕ್ತಿಯಾದ ಶ್ರೀ ವಿರುಪಣ್ಣ ಕಲ್ಲೂರ್ ಇವರಿಗೆ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಭಿವೃದ್ಧಿ ನಿಗಮದ ನಾಮನಿರ್ದೇಶಕರಾಗಿ ಆಯ್ಕೆ ಮಾಡಿದ್ದಾರೆ ಹಾಗು ನಮ್ಮ ಸಮಾಜದವರಾದ ಶ್ರೀ ಸಿದ್ದಪ್ಪ ಕಾರಟಗಿ ಇವರನ್ನು ಕಾರಟಗಿ ಪುರಸಭೆಗೆ ನಾಮ ನಿರ್ದೇಶಕರಾಗಿ ಆಯ್ಕೆ ಮಾಡಿದ್ದಾರಿ ಹಾಗೂ ಕನಕಗಿರಿ ಸಮಾಜದ ತಾಲೂಕ ಅಧ್ಯಕ್ಷರಾದ ಟಿ ಜೆ ರಾಜಶೇಖರ್ ಹಾಗು ಯುವಕ ಸಂಘದ ಅಧ್ಯಕ್ಷರಾದ ಕೃಷ್ಣ ಬೆನಕನಾಳ್ ಎಲ್ಲರಿಗೂ ಕೊಪ್ಪಳ ತಾಲೂಕು ಗಂಗಾಮತ ಸಮಾಜದ ವತಿಯಿಂದ ಸನ್ಮಾನ ಮಾಡಿ ಅಭಿನಂದನೆಗಳನ್ನು ತಿಳಿಸಿದೆವು

ಕೊಪ್ಪಳ ತಾಲೂಕು ಅಧ್ಯಕ್ಷರಾದ ಹುಲುಗಪ್ಪ ಬಾರಕೇರ ಕಾರ್ಯದರ್ಶಿ ರಾಜು ಕಲೆಗಾರ ಗೌರವಾಧ್ಯಕ್ಷರಾದ ರಮೇಶಪ್ಪ ಕಬ್ಬೆರ್ ಹಾಗೂ ಗೌರವ ಸಲಹೆಗಾರರಾದ ಹಾಗೂ ಕಾಂಗ್ರೆಸ್ ಪಕ್ಷದ ನಿವೃತ್ತಿ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ಓ ಯಂಕಪ್ಪ ಹಾಗು ಉದಯ್ ಕಬ್ಬೆರ್ ಉಪಸ್ಥಿತರಿದ್ದರು

### 5ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ * ಪೂರ್ವ ಸಿದ್ಧತೆಗಳ ಪರಿಶೀಲನೆಗಾಗಿ ಜಿಲ್ಲಾ ನಿರ್ವಹಣಾ ಸಮಿತಿ ಸಭೆ

# ಜಿಲ್ಲೆಯ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸಲು ಕ್ರಮ ಕೈಗೊಳ್ಳಿ: ನಲಿನ್ ಅತುಲ್



ಕೊಪ್ಪಳ, ಮಾರ್ಚ್ 21: ಜಿಲ್ಲೆಯ ಎಲ್ಲಾ ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆ ಹಾಕಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಪಶು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ (ಎನ್.ಎ.ಡಿ.ಸಿ.ಪಿ) ಕಾರ್ಯಕ್ರಮದಡಿ 5ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಪೂರ್ವ ಸಿದ್ಧತೆಗಳ ಪರಿಶೀಲನೆಗಾಗಿ ಕೊಪ್ಪಳ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಿಲ್ಲಾ ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 5ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮವು ಏಪ್ರಿಲ್ 1ರಿಂದ ಏ.30ರವರೆಗೆ ನಡೆಯಲಿದ್ದು ಎಲ್ಲಾ ಜಾನುವಾರುಗಳಿಗೆ ಲಸಿಕೆ ಸಿಗುವಂತಾಗಬೇಕು. ಕಾಲುಬಾಯಿ ಲಸಿಕೆಯಿಂದ ಜಿಲ್ಲೆಯ ಯಾವುದೇ ಜಾನುವಾರು ಬಿಟ್ಟು ಹೋಗದಂತೆ ನೋಡಿಕೊಳ್ಳಿ. ಲಸಿಕೆಯ ಬಗ್ಗೆ ಜಿಲ್ಲೆಯ ಎಲ್ಲಾ ರೈತರಿಗೆ ಜಾಗೃತಿ ಮೂಡಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು, ಲಸಿಕಾ ತಂಡದ ಮುಖ್ಯಸ್ಥರು ಹಾಗೂ ಎಲ್ಲಾ ಲಸಿಕಾದಾರರು ತಮ್ಮ ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕು. ಲಸಿಕೆಯ ಬಳಿಕ ಜಾನುವಾರುಗಳ ಉಪಚಾರ ಬಗ್ಗೆಯೂ ರೈತರಿಗೆ ತಿಳುವಳಿಕೆ ನೀಡಿ ಎಂದು ಹೇಳಿದರು.ಆಕಾಶವಾಣಿ ಬಾನುಲಿ ಕೇಂದ್ರಗಳಲ್ಲಿ ಕಾಲುಬಾಯಿ ರೋಗದ ಲಸಿಕಾ ಅಭಿಯಾನ ಕುರಿತಂತೆ ಪ್ರಚಾರಕೈಗೊಳ್ಳಬೇಕು. ಲಸಿಕಾ ಅಭಿಯಾನದ ಪ್ರಚಾರಕ್ಕೆ ಕರ ಪತ್ರಗಳನ್ನು ಹಂಚಬೇಕು. ಬ್ಯಾನರ್ ಗಳನ್ನು ಪ್ರದರ್ಶಿಸಬೇಕು. ಸ್ಥಳೀಯ ದಿನ ಪತ್ರಿಕೆಗಳಲ್ಲಿ ಪ್ರಕಟಣೆಗಳನ್ನು ಹೊರಡಿಸಿ ಕ್ರಮ ಕೈಗೊಳ್ಳಬೇಕು. ಗ್ರಾಮದ ಗ್ರಾಮ ಪಂಚಾಯತಿಗೆ ಲಸಿಕೆಯ 2 ದಿನದ ಮುಂಚಿತವಾಗಿ ತಿಳಿಸಿ ಗ್ರಾಮ ಪಂಚಾಯತ್ ವತಿಯಿಂದ ಡಂಗುರ ಅಥವಾ ಟಾಂ ಟಾಂ ಮೂಲಕ ರೈತರಿಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳಬೇಕು. ಆಯಾ ತಾಲ್ಲೂಕಿನ ವಿಸ್ತರಣಾ ಅಧಿಕಾರಿಗಳು ಎಂ.ಪಿ.ಸಿ.ಎಸ್, ರೈತ ಸಂಪರ್ಕ ಕೇಂದ್ರ ಸಂಘಗಳು ಹಾಗೂ ಪಶುಸಖಿಯರ ಮೂಲಕ ಕಾಲು ಬಾಯಿ ರೋಗ ಲಸಿಕಾ ಅಭಿಯಾನದ ಕುರಿತು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಲಸಿಕಾ ಅಭಿಯಾನಕ್ಕೆ ಅಗತ್ಯ ಸಿದ್ಧತೆ: ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ. ಪಿ.ಎಂ.ಮಲ್ಲಯ್ಯ ಅವರು ಲಸಿಕಾ ಅಭಿಯಾನದ ಬಗ್ಗೆ ಮಾಹಿತಿ ನೀಡುತ್ತಾ, 5ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನವನ್ನು ಏಪ್ರಿಲ್ 1ರಿಂದ ಒಂದು ತಿಂಗಳ ಕಾಲ ಹಮ್ಮಿಕೊಳ್ಳಲಾಗಿದ್ದು, ಕೊಪ್ಪಳ ಜಿಲ್ಲೆಯಲ್ಲಿ ವಾಸ್ತವವಾಗಿ ಇರುವ ಒಟ್ಟು 2,72,467 ಲಕ್ಷ ಜಾನುವಾರುಗಳಿಗೆ ಲಸಿಕೆಯನ್ನು ಹಾಕುವ ಗುರಿ ಹೊಂದಲಾಗಿರುತ್ತದೆ. ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಲಸಿಕೆ ಮತ್ತು ಸಿರಿಂಜ್-ನೀಡಲ್‌ಗಳ ಶೇಖರಣೆ, ಲಸಿಕಾದಾರರ ವ್ಯವಸ್ಥೆ, ಲಸಿಕಾದಾರರಿಗೆ ಪ್ರವಾಸ ಭತ್ಯೆ ಮತ್ತು ಪ್ರೋತ್ಸಾಹ ಧನ, ಆನ್‌ಲೈನ್ ವರದಿ ನಿರ್ವಹಣೆ, ಮಾನಿಟರಿಂಗ್ ವ್ಯವಸ್ಥೆ, ಲಸಿಕಾ ಪ್ರತಿಕೂಲ ಪರಿಣಾಮ ಮತ್ತು ನಿರ್ವಹಣೆಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಿ.ಮಂಜುನಾಥ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಕೊಪ್ಪಳ ಘಟಕದ ಸಹಾಯಕ ನಿರ್ದೇಶಕರು ಹಾಗೂ ಪಾಲಿಕ್ಲಿನಿಕ್‌ನ ಮುಖ್ಯ ಪಶುವೈದ್ಯಾ ಧಿಕಾರಿ ಡಾ. ಯಮನಪ್ಪ ಬಿ.ಹೆಚ್. ಸೇರಿದಂತೆ ಪಶು ಇಲಾಖೆಯ ವಿವಿಧ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಪಶು ವೈದ್ಯಾಧಿಕಾರಿಗಳು ಹಾಗೂ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

### ಲೋಕಸಭಾ ಚುನಾವಣೆ- 2024

# ಸ್ವೀಪ್ ಚಟುವಟಿಕೆ ಪರಿಣಾಮಕಾರಿ ಅನುಷ್ಠಾನಗೊಳಿಸಿ: ರಾಹುಲ ಶಿಂಧೆ



ಬೆಳಗಾವಿ,ಮಾ. : ಲೋಕಸಭಾ ಚುನಾವಣೆಯ ಸಂಬಂಧ ಜಿಲ್ಲೆಯಲ್ಲಿ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಿಸಲು ಹಾಗೂ ಮತದಾರರಲ್ಲಿ ನೈತಿಕ ಮತದಾನದ ಕುರಿತು ಜಾಗೃತಿ ಮೂಡಿಸುವದರ ಜೊತೆಗೆ ಸ್ವೀಪ್ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿಯೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ವಿಡೀಯೊ ಸಂವಾದ ಸಭಾಂಗಣದಲ್ಲಿ ಮಾ.21 ರಂದು ಜರುಗಿದ ಜಿಲ್ಲಾ ಸ್ವೀಪ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರಲ್ಲಿ ನೈಜ ಮತದಾನದ ಅರಿವು ಮತ್ತು ಮತದಾನದ ಪ್ರಮಾಣ ಹೆಚ್ಚಿಸುವಲ್ಲಿ ಸ್ವೀಪ್ ಸಮಿತಿಯಿಂದ ನಿರಂತರ ಚಟುವಟಿಕೆ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾರಿಯಾಗಿ ಆಯೋಜಿಸಬೇಕು. ಕಳೆದ ಚುನಾವಣೆಗಳಲ್ಲಿ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಗ್ರಾಮೀಣ ಭಾಗಗಳಿಗಿಂತ ಕಡಿಮೆ ಆಗಿದ್ದು ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಸಂಬಂಧಿತ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು.

ಮತದಾನ ಜಾಗೃತಿಗಾಗಿ ಬೀದಿ ನಾಟಕ, ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುವದರ ಜೊತೆಗೆ ಮನೆ ಮನೆಗೆ ಭೇಟಿ ನೀಡಿ ಮತದಾನದ ಕುರಿತು ಜಾಗೃತಿ ಮೂಡಿಸಬೇಕು. ಕಳೆದ ಚುನಾಣೆಗಳಲ್ಲಿ ಕಡಿಮೆ ಮತದಾನವಾಗಿರುವಂತಹ ಮತಗಟ್ಟೆಗಳನ್ನು ಗುರುತಿಸಿ ಆ ಭಾಗದಲ್ಲಿ ಸೂಕ್ತ ಯೋಜನೆಗಳನ್ನು ರೂಪಿಸಿಕೊಂಡು ಸ್ವೀಪ್ ಚಟುವಟಿಕೆಗಳನ್ನು ನಡೆಸುವ ಮೂಲಕ ಮತದಾನದ ಪ್ರಮಾಣ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿನ ವಲಸೆ ಕಾರ್ಮಿಕರನ್ನು ಗುರುತಿಸಿ ಮತದಾನ ದಿನದಂದು ಪಾಲ್ಗೊಳ್ಳಲು ಪ್ರೇರೆಪಿಸಬೇಕು. ಜೊತೆಗೆ ಜನದಟ್ಟಣೆ ಇರುವಂತಹ ಪ್ರದೇಶಗಳಲ್ಲಿ ಮತದಾನ ಮಹತ್ವದ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ಕ್ರಮ ಜರುಗಿಸಬೇಕು. ಮತದಾನದ ದಿನದಂದು ಅರ್ಹ ಮತದಾರರೆಲ್ಲರೂ ಮತಗಟ್ಟೆಗಳಿಗೆ ಆಗಮಿಸಿ ತಮ್ಮ ಹಕ್ಕನ್ನು ಚಲಾಯಿಸಬೇಕು. ಅಲ್ಲದೇ ಮತಗಟ್ಟೆಗಳಲ್ಲಿ ಅಗತ್ಯದ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸುವದರ ಮೂಲಕ ಅರ್ಹ ಮತದಾರರೆಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಸ್ವೀಪ್ ಸಮಿತಿ ಸದಸ್ಯರು ತಮಗೆ ವಹಿಸಿದ ಕಾರ್ಯಹಂಚಿಕೆ ವ್ಯಾಪ್ತಿಯಲ್ಲಿ ನಡೆಸುವ ಸ್ವೀಪ್ ಚಟುವಟಿಕೆಗಳ ಸಂಬಂಧ ಪ್ರತಿನಿತ್ಯ ಚಟುವಟಿಕೆಗಳನ್ನು ಕೈಗೊಳ್ಳುವದರ ಮೂಲಕ ಜಿಲ್ಲೆಯ ಯಾವೊಬ್ಬ ಅರ್ಹ ಮತದಾರರು ಮತದಾನದದಿಂದ ವಂಚಿರಾಗದಂತೆ, ಸ್ವಯಂ ಪ್ರೇರಣೆಯಿಂದ ಮತದಾನದ ಹಬ್ಬದಲ್ಲಿ ಭಾಗಿವಹಿಸುವಂತಹ ಕಾರ್ಯಕ್ರಮಗಳನ್ನು ಆಯೋಜಿಸಲು ತಿಳಿಸಿದರು.

ಸ್ವೀಪ್ ಘೋಳವಾಕ್ಯ:

ಈ ವರ್ಷದ ಸ್ವೀಪ್ ಘೋಳವಾಕ್ಯ 'ಚುನಾವಣಾ ಪರ್ವ ದೇಶದ ಗರ್ವ ಯಾವೊಬ್ಬ ಮತದಾರನೂ ಮತದಾನದಿಂದ ಹೊರಗುಳಿಯಬಾರದು.'ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ' ಎಂಬ ಧ್ಯೇಯ ಹೊಂದಬೇಕು ಎಂಬ ಘೋಳವಾಕ್ಯದೊಂದಿಗೆ ಮತದಾರರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ ಶಿಂಧೆ ಹೇಳಿದರು.

ಸಭೆಯಲ್ಲಿ ಜಿಲ್ಲಾ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಅಬ್ದುಲ್ ರಶೀದ್ ಮಿರ್ಜನ್ನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ವಿಕಲಚೇತನರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನೆಯಲ್ಲಿ ಮಹಾಮನೆ ಕಾರ್ಯಕ್ರಮ

ಹುಬ್ಬಳ್ಳಿ: ಬಸವಕೇಂದ್ರದ ಮನೆಯಲ್ಲಿ ಮಹಾಮನೆ ಕಾರ್ಯಕ್ರಮರವಿವಾರ ದಿ. 24-03-2024 ರಂದು ಮುಂಜಾನೆ 10.30 ಗಂಟೆಗೆ ಗೋಕುಲ ರಸ್ತೆ, ಲೋಹಿಯಾ ನಗರದ ಮನೆನಂ.1350, ಉಮಾ ಹುಲಿಕಂತಿಮಠಅವರ ಮನೆಯಲ್ಲಿಜರುಗಲಿದೆ. ಬಸವ ಕೇಂದ್ರದ ನಿರ್ದೇಶಕ ಮಹಾದೇವಪ್ಪ ಬಿ.ಕಟ್ಟಿಅವರುಅನುಭಾವ ನೀಡುವರು.

ಬಸವ ಕೇಂದ್ರದಅಧ್ಯಕ್ಷ ಪ್ರೊ ಜಿ.ಬಿ.ಹಳ್ಯಾಳ ಅವರುಅಧ್ಯಕ್ಷತೆ ವಹಿಸುವರು. ಆಸಕ್ತರು ಭಾಗವಹಿಸಬೇಕೆಂದು ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ ಹಾಗೂ ಗ್ರಂಥಪಾಲಕಡಾ. ಸುರೇಶ ಡಿ. ಹೊರಕೇರಿಅವರು ವಿನಂತಿಸಿದ್ದಾರೆ.ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ ಹಾಗೂ ಗ್ರಂಥಪಾಲಕಡಾ. ಸುರೇಶ ಡಿ. ಹೊರಕೇರಿಅವರು ವಿನಂತಿಸಿದ್ದಾರೆ.



ಗದಗ: ಬೆಟಗೇರಿಯ ಶ್ರೀ ಮಂಜುನಾಥ ದೇವಸ್ಥಾನ ಟ್ರಸ್ಟ (ರಿ) ಅಡಿಯಲ್ಲಿ ನಡೆಯುತ್ತಿರುವ ಶಿಶು ಪಾಲನಾ ಕೇಂದ್ರದ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಹಿರೇಕೊಪ್ಪ ಗ್ರಾಮದ ಶ್ರೀ ಶರಣ ಬಸವೇಶ್ವರ ಶಿಶುಕೇಂದ್ರದ ಶಿಕ್ಷಕಿಯಾದ ಶ್ರೀಮತಿ ಶರಣಮ್ಮ ಹಡಪದ ಸೇವಾ ಭಾವನೆಯನ್ನು ಮೆಚ್ಚಿದ ಹಿರೇಕೊಪ್ಪ ಗ್ರಾಮದ ನಾಗರಿಕರು ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಶ್ರೀ ಮಂಜುನಾಥ ದೇವಸ್ಥಾನ ಟ್ರಸ್ಟ ನಿರ್ದೇಶಕರಾದ ಶಂಕರ ಮುಳಗುಂದ, ಪತ್ರಕರ್ತ ಸುನೀಲಸಿಂಗ ಲದ್ದಿಗೇರಿ, ಶಿಕ್ಷಕಿ ಮೆಹಬೂಬಿ ನಮಾಜಿ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ಮಕ್ಕಳಿದ್ದರು.

# ವಚನಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಮಾರ್ಗದರ್ಶಿ : ಶ್ರೀದೇವಿ ಶೆಟ್ಟರ್



ಗದಗ : ವಚನ ಸಾಹಿತ್ಯ ಸುಲಭವಾಗಿ ಅರ್ಥವಾಗುವ ಮತ್ತು ಅಪಾರ ಜ್ಞಾನವನ್ನು ನೀಡುವ ಸಾಹಿತ್ಯವಾಗಿದ್ದು, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ವಚನಗಳು ಮಾರ್ಗದರ್ಶಿಯಾಗಿವೆ ಆದ್ದರಿಂದ ವಿದ್ಯಾರ್ಥಿಗಳು ಕೇವಲ ಪಠ್ಯ ವಿಷಯದ ಜೊತೆಗೆ ವಚನಗಳನ್ನು ಅಧ್ಯಯನ ಮಾಡಬೇಕು. ಎಂದು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಉಪಾಧ್ಯಕ್ಷರಾದ ಅಧ್ಯಕ್ಷತೆ ಶ್ರೀದೇವಿ ಶೆಟ್ಟರ್ ನುಡಿದರು.

ಅವರು ದಿ.20 ರಂದು ನಗರದ ತೋಂಟದಾರ್ಯ ಶಿಕ್ಷಣ ಸಂಸ್ಥೆಯಲ್ಲಿ ವಿಶ್ವ ಮಹಿಳಾ ದಿನದ ಅಂಗವಾಗಿ ಅಕ್ಕಮಹಾದೇವಿ ಯೋಗ ವಿಜ್ಞಾನಕೇಂದ್ರವು ಆಯೋಜಿಸಿದ್ದ ವಚನ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ,

ವಿಶ್ವಗುರು ಬಸವೇಶ್ವರರು ಜಾತಿ ವ್ಯವಸ್ಥೆಯನ್ನು ತೊಡೆದುಹಾಕಿ ಸಮಸಮಾಜವನ್ನು ನಿರ್ಮಿಸಲು ಶ್ರಮಿಸಿದ ಮಹಾತ್ಮರಾಗಿದ್ದು, ಇತ್ತೀಚೆಗೆ ಕರ್ನಾಟಕ ಸರ್ಕಾರ ಬಸವೇಶ್ವರರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿರುವುದು ಶ್ಲಾಘನೀಯವಾಗಿದೆ. ಮಕ್ಕಳನ್ನು ಪ್ರಜ್ಞಾವಂತ ನಾಗರಿಕರನ್ನಾಗಿಸುವ ನಟ್ಟಿನಲ್ಲಿ, ಅವರು ಮೌಲ್ಯಯುತ ಜೀವನ ನಡೆಸುವ ನಟ್ಟಿನಲ್ಲಿ ವಚನಸಾಹಿತ್ಯದ ಅಧ್ಯಯನ ಮಹತ್ವಪೂರ್ಣವಾಗಿದೆ ಎಂದರು. ಅತಿಥಿಗಳಾಗಿ ಭಾಗವಹಿಸಿದ್ದ ಮಾಜಿ ನಗರಸಭೆ ಅಧ್ಯಕ್ಷರಾದ ಶಿವಲೀಲಾ ಅಕ್ಕಿ ಮಾತನಾಡಿ, ವಚನ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಿರುವ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಕಾರ್ಯ ಅಭಿನಂದನೀಯವಾಗಿದ್ದು, ಇಂಥ ಮೌಲಿಕ ಸ್ಪರ್ಧೆಗಳಲ್ಲಿ ಸೋಲು-ಗೆಲುವಿಗಿಂತ ಭಾಗವಹಿಸುವುದು ಮುಖ್ಯವಾಗಿರುತ್ತದೆ. ವಿದ್ಯಾರ್ಥಿಗಳು ತಮ್ಮ ಜೀವನದುದ್ದಕ್ಕೂ ಶಿಕ್ಷಕರಿಗೆ ಗೌರವ ನೀಡಬೇಕು. ಪ್ರತಿಯೊಬ್ಬ ವಿದ್ಯಾರ್ಥಿ ತಂದೆ-ತಾಯಿಗಳೊಂದಿಗೆ, ಗುರು-ಹಿರಿಯರೊಂದಿಗೆ ಹೇಗೆ ನಡೆದುಕೊಳ್ಳಬೇಕು ಎಂಬುದನ್ನು ತಿಳಿಸುವ ವಚನಸಾಹಿತ್ಯ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡುತ್ತವೆ. ಸಾಮಾಜಿಕ ಸ್ವಾಸ್ಥ್ಯವನ್ನು ಕಾಪಾಡುವ ಕೆಲಸವನ್ನು ವಚನಗಳು ಮಾಡುತ್ತವೆ ಎಂದರು.

ವಿದ್ಯಾರ್ಥಿಗಳಿಂದ ವಚನ ಪ್ರಾರ್ಥನೆ ನೆರವೇರಿತು. ವಚನ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ವೇದಿಕೆ ಮೇಲೆ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಅಕ್ಕಮಹಾದೇವಿ ಚಟ್ಟಿ, ಸುವರ್ಣ ವಸ್ತ್ರದ, ವಿಶಾಲಾಕ್ಷಿ ಕುರಗೋಡ, ಕವಿತಾ ನಾರಗುಣ್ಣವರ ಉಪಸ್ಥಿತರಿದ್ದರು. ಸುರೇಖಾ ಕುಂಬಾರಗೇರಿಮಠ ನಿರೂಪಿಸಿದರೆ ಸುಮಾ ಹಿರೇಮಠ ವಂದಿಸಿದರು. ಶಿಕ್ಷಕರಾದ ಕೆ.ಎಂ ಗೌಡರ, ಬಶೀರಾ ಕಲೇಬಾಯಿ, ಮಂಜುಳಾ ಭೂಮಣ್ಣವರ, ಶಶಿಧರಗೌಡ ಪಾಟೀಲ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮರ್ಲಾನಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ 5000 ದೇಣಿಗೆ ಮತ್ತು ಸ್ವಚ್ಛತಾ ಕಾರ್ಯ



ಕಾರಟಗಿ: ಪುನಶ್ಚೇತನದ ಕೊನೆಯ ಹಂತದಲ್ಲಿರುವ ಪಟ್ಟಣದ ಪುರಾತನ, ಐತಿಹಾಸಿಕ ಕಲ್ಯಾಣಿ ಚಾಲುಕ್ಯರ ಕಾಲದ ಸುಂಕಲಿ ವೀರಪ್ಪ ಕಲ್ಯಾಣಿಯನ್ನು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳು ವೀಕ್ಷಣೆ ಮಾಡಿ ಸ್ವ ಇಚ್ಛೆಯಿಂದ ಸಮಾಧಾನ ಮಾಡಿದರು

ನಂತರ ಮರಳು ಸಿದ್ದಯ್ಯ ಸ್ವಾಮಿ ಹಿರೇಮಠ್ ಮಕ್ಕಳಿಗೆ ಪುಷ್ಕರಣಿಯ ಬಗ್ಗೆ ವಿವರವಾಗಿ ವಿವರಿಸಿದರು ಇತಿಹಾಸವನ್ನು ಮುಂದಿನ ಪೀಳಿಗೆಗೆ ಗುರುತಿಸುವಂತಹ ಪುಷ್ಕರಣಿ ಮರೆ ಮಾಚಿ ಹೋಗಿದ್ದಂತ ಕುರುವನ್ನು ಪುನರ್ಜೀವ ನೀಡಿದಂತಹ ಕಾರಟಗಿಯ ಜನತೆಗೆ ಮತ್ತು ಮುಂದಾಳತ್ವ ವನ್ನೋ ವಹಿಸಿದಂತ ಸಿದ್ದರಾಮಯ್ಯ ತಾತನವರಿಗೂ ನಮ್ಮ ಶಾಲೆಯ ಪ್ರಭಾ ಶಾಲಾ ಮಕ್ಕಳ ಪರವಾಗಿ ಧನ್ಯವಾದಗಳು ನಮ್ಮ ಮಕ್ಕಳೊಂದಿಗೆ ಪುಷ್ಕರಣಿ ನೋಡಿ ಸಂತೋಷವಾಯಿತು ಎಂದರು ನಂತರ ಶಿಕ್ಷಕ ಆಂಜನೇಯ ಮಾತನಾಡಿ ಈ ಕಲ್ಯಾಣಿ ಮತ್ತು ಇಲ್ಲಿನ ಪುರಾತನ ಐತಿಹ್ಯಗಳು ಹಿಂದಿನ ಗತಕಾಲದ ವೈಭವಕ್ಕೆ ಸಾಕ್ಷಿಯಾಗಿವೆ. ಈ ಸ್ಮಾರಕಗಳ ಸ್ವಚ್ಚತೆ ಮತ್ತು ಸಂರಕ್ಷಣೆ ನಮ್ಮ ಹೊಣೆಯಾಗಿದೆ ಎಂದು ಬಣ್ಣಿಸಿದ ಅವರು ಕಾರಟಗಿ ಪುಷ್ಕರಣಿಯ ಪುನರುಜ್ಜಿ ವನ ಕಾರ್ಯಕ್ಕೆ ಎಲ್ಲರೂ ಭಾಗವಹಿಸಿ ಸುಂದರ ವನವನ್ನಾಗಿ ನಿರ್ಮಿಸುವಂತೆ ಮನವಿ ಮಾಡಿದರು ಸುಮಾರು 50ಕ್ಕೂ ಮಕ್ಕಳು ಶಿಕ್ಷಕರು ಈ ಸ್ವಚ್ಚತಾ ಕಾರ್ಯಕ್ಕೆ ಕೈ ಜೋಡಿಸಿದ್ದರು. ಈ ಸಂದರ್ಭದಲ್ಲಿ ಮರಳು ಸಿದ್ದಯ್ಯ ಸ್ವಾಮಿ ಎಸ್ ಡಿ ಎಮ್ ಸಿ ಅಧ್ಯಕ್ಷ ವೀರೇಶ್ ಕೆ ಮುಖ್ಯ ಶಿಕ್ಷಕಿ ಸಾವಿತ್ರಿ ಮಲ್ಲನಗೌಡ ಕಾವೇರಿ ಭಾಯಿ ಶ್ರೀಮತಿ ಗಾಯತ್ರಿ ಶರಣಮ್ಮ ಸಹ ಶಿಕ್ಷಕರಾದ ಮೊಹಮ್ಮದ್ ರಫಿ ಶ್ಯಾಮಿದ ಸೇರಿದಂತೆ ಉತ್ತರಣಿ ಸಮಿತಿಯ ಸರ್ವ ಸದಸ್ಯರು ಇನ್ನಿತರರು ಇದ್ದರು.

# ಕ್ಷತ್ರಿಯ ಫೌಂಡೇಶನ್ ಗದಗ ಹಾಗೂ ಗದಗಿನ ಹಲವಾರು ವಿವಿಧ ಹಿಂದೂ ಸಂಘಟನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ

ಗದಗ: ಶ್ರೀ ಜೋಡ ಮಾರುತಿ ದೇವಸ್ಥಾನದ ಪಕ್ಕದಲ್ಲಿ ಶಾದಿ ಮಹಲ್ ಕಟ್ಟುವುದಕ್ಕೆ ರಾಜ್ಯ ಸರ್ಕಾರವು ಮತ್ತು ಸ್ಥಳೀಯ ಸಚಿವರು ಮತ್ತು ಗದುಗಿನ ಮುಸಲ್ಮಾನ್ ಸಮಾಜ ಬಾಂಧವರು ಶಾದಿಮಹಲ್‌ವನ್ನು ಬೇರೆ ಸ್ಥಳದಲ್ಲಿ ನಿರ್ಮಾಣ ಮಾಡಲು ಸರಕಾರದಿಂದ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಸದರಿ ಈ ಹಿಂದೆ ಗದುಗಿನ ಬಹು ಸಂಖ್ಯಾತ ಹಿಂದುಗಳು ಕೋಮು ಸೌಹಾರ್ದತೆ ದೃಷ್ಟಿಯಿಂದ ಐತಿಹಾಸಿಕ ಪ್ರಸಿದ್ಧ ಮತ್ತು ಗದುಗಿನ ಹಿಂದುಗಳ ಆರಾಧ್ಯ ದೇವರಾದ ಶ್ರೀ ವೆಂಕಟೇಶ್ವರ ದೇವಸ್ಥಾನವನ್ನು ಮತ್ತು ಅದರ ಸುತ್ತ ಮುತ್ತಲಿನ ಶಾಲೆ ಆವರಣ ಹಾಗೂ ಈಶ್ವರ ನಂದಿ ದೇವಸ್ಥಾನವನ್ನು ಮುಸಲ್ಮಾನ ಸಮಾಜಕ್ಕೆ ಕೋಮು ಸೌಹಾರ್ದತೆ ದೃಷ್ಟಿಯಿಂದ ಬಿಟ್ಟು ಕೊಟ್ಟಿದ್ದು ಈಗ ಅಲ್ಲಿ ಜುಮ್ಮಾ ಮಜ್ಜಿದ ಅಂತ ಹೆಸರು ಇಟ್ಟಿರುತ್ತಾರೆ. ಕೋಮು ಸೌಹಾರ್ದತೆ ದೃಷ್ಟಿಯಿಂದ ದೇವಸ್ಥಾನದ ಪಕ್ಕದಲ್ಲಿರುವ ಸರ್ಕಾರಿ ಜಾಗೆಯನ್ನು ಸ್ಥಳೀಯ ಸಚಿವರ ಹಾಗೂ ಸರ್ಕಾರದ ಮಧ್ಯಸ್ಥಿಕೆಯಲ್ಲಿ ಮುಸ್ಲಿಂ ಸಮಾಜ ಬಾಂಧವರ ಮನವೊಲಿಸಿ ದೇವಸ್ಥಾನದ ಅಭಿವೃದ್ಧಿಗಾಗಿ,

ದೇವಸ್ಥಾನಕ್ಕೆ ಹಸ್ತಾಂತರಿಸಿ ಬಹುಸಂಖ್ಯಾತ ಹಿಂದೂಗಳ ಭಾವನೆಗೆ ಗೌರವ ಸಲ್ಲಿಸಲು ವಿನಂತಿಸಿ ನಾಳೆ ದಿನಾಂಕ: 23.03.2024ರ ಶನಿವಾರ ಬೆಳಿಗ್ಗೆ 11 ಗಂಟೆಗೆ ಶ್ರೀ ಜೋಡ ಮಾರುತಿ ದೇವಸ್ಥಾನದ ಹತ್ತಿರ ಸೇರಿಕೊಂಡು ಬೈಕ್ ಮುಖಾಂತರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುವುದು ಆದ ಕಾರಣ ಸರ್ವ ಹಿಂದೂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ವಿನಂತಿ ಹಾಗೂ ಕ್ಷತ್ರಿಯ ಬ್ರಿಗೇಡ್ ಫೌಂಡೇಶನ್ ಅಧ್ಯಕ್ಷರು ನಾರಾಯಣ ನಿರಂಜನ್ 9902367479, ಹೋರಾಟ ಸಮಿತಿ ಅಧ್ಯಕ್ಷರಾದ ಶ್ರೀಮತಿರಾಣಿ ಚಂದಾವರಿ 99001 72601, 77955 35935, 9844763711, ಸುಧೀರ ಕಾಟಿಗರ 94485 91360